ಆ), ಇ), ಈ) ಸದ್ಯಕ್ಕೆ ಈ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ಭದ್ರಾವತಿ ತಾಲ್ಲೂಕು ಕೊಡ್ಲಿಗೆರೆ ಕಮ್ಮರಘಟ್ಟ ರಸ್ತೆಯ ರಿಪೇರಿ

166 (750) ಶ್ರೀ ಕರಿಯಣ್ಣ (ಹೊಳೇಹೊನ್ನೂರು):-

ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಭದ್ರಾವತಿ ತಾಲ್ಲೂಕು, ಕೊಡ್ಲಿಗೆರೆ ಕಮ್ಮರಘಟ್ಟ ರಸ್ತೆಯಲ್ಲಿ ಬಸ್ಸು, ಎತ್ತಿನಗಾಡಿ ಓಡಾಡುವುದಕ್ಕೆ ಆಗದೆ ಕೆಟ್ಟಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ;

ಆ) ಹಾಗಿದ್ದಲ್ಲಿ, ಸದರಿ ರಸ್ತೆಯನ್ನು ಕೂಡಲೇ ದುರಸ್ತಿಗೊಳಿಸಲು ಸರ್ಕಾರದವರು ಕ್ರಮ ಕೈಕೊಳ್ಳುವರೇ ?

ಶ್ರೀ ಕೆ.ಹೆಚ್. ರಂಗನಾಥ್ (ಲೋಕೋಪಯೋಗಿ ಸಚಿವರು):–

ಅ) ಭದ್ರಾವತಿ ತಾಲ್ಲೂಕು ಕೂಡ್ಲಿಗೆರೆ, ಕಮ್ಮರಗಟ್ಟ ರಸ್ತೆಯು ವಾಹನ ಸಂಚಾರಕ್ಕೆ ಅಡಚಣೆ ಆಗುವಷ್ಟು ಕೆಟ್ಟಿರುವುದಿಲ್ಲ.

ಆ) ರಸ್ತೆಯ ಆಯ್ದ ಭಾಗಗಳಲ್ಲಿ 90–91ನೇ ಸಾಲಿನಲ್ಲಿ 0.95 ಲಕ್ಷ ರೂ.ಗಳು, 91–92ರಲ್ಲಿ 14.54 ಲಕ್ಷ ರೂ.ಗಳು ಹಾಗೂ 92–93ರಲ್ಲಿ 1.45 ಲಕ್ಷ ರೂ.ಗಳಲ್ಲಿ ವೆಚ್ಚದಲ್ಲಿ ರಸ್ತೆಯನ್ನು ಆದಷ್ಟು ಸುಸ್ಥಿತಿಯಲ್ಲಿಡಲಾಗುತ್ತಿದೆ. ಪ್ರಸಕ್ತ 9.5 ಕಿ.ಮೀ.ನಿಂದ 20ನೇ ಕಿ.ಮೀ. ವರೆವಿಗೆ ಆಯ್ದ ಭಾಗಗಳಲ್ಲಿ ಡಾಂಬರಿನ ಕಾಮಗಾರಿಯು ಪ್ರಗತಿಯಲ್ಲಿದೆ.

ಕೊಡಗು ಜಿಲ್ಲೆಯಲ್ಲಿ ಹಾನಿಗೀಡಾದ ರಸ್ತೆ ರಿಪೇರಿಗಾಗಿ ಬಿಡುಗಡೆಯಾದ ಹಣ

167 (795) ಶ್ರೀಮತಿ ಸುಮಾವಸಂತ (ವೀರಾಜಪೇಟೆ):-

ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) 1991–92ನೇ ಸಾಲಿನಲ್ಲಿ ಕೊಡಗು ಜಿಲ್ಲೆಯಲ್ಲಿ ಮಳೆಯಿಂದ ರಸ್ತೆ ಮೋರಿ ಹಾಗೂ ಹೆಮವಾಳೆದಂಡೆಗಳು ಹಾನಿಗೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಹಾಗಿದ್ದಲ್ಲಿ ಎಲ್ಲೆಲ್ಲಿ ಹಾನಿಗೀಡಾಗಿದೆ;

ಆ) ದುರಸ್ತಿಗಾಗಿ ಹಣ ಬಿಡುಗಡೆ ಮಾಡಲಾಗಿದೆಯೇ; ಹಾಗಿದ್ದಲ್ಲಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; ಇಲ್ಲದಿದ್ದಲ್ಲಿ, ಬಿಡುಗಡೆ ಮಾಡಲಾಗುವುದೇ ?

ಶ್ರೀ ಕೆ.ಹೆಚ್. ರಂಗನಾಥ್ (ಲೋಕೋಪಯೋಗಿ ಸಚಿವರು):–

ಅ) 1991–92ನೇ ಸಾಲಿನಲ್ಲಿ ಕೊಡಗು ಜಿಲ್ಲೆ, ಮಡಿಕೇರಿ ಸೋಮವಾರಪೇಟೆ ಹಾಗೂ ವೀರಾಜಪೇಟೆ ತಾಲ್ಲೂಕುಗಳಲ್ಲಿ ಲೋಕೋಪಯೋಗಿ ವ್ಯಾಪ್ತಿಯಲ್ಲಿ ಒಟ್ಟು 131.18ಕಿ.ಮೀ. ಉದ್ದದ ರಸ್ತೆ, 80 ಮೋರಿಗಳು, 7 ಸೇತುವೆಗಳು ಹಾಗೂ 10 ಕಟ್ಟಡಗಳು ಅತೀವೃಷ್ಟಿಯಿಂದ ಹಾನಿ ಉಂಟಾಗಿದ್ದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಈ ರೀತಿ ಹಾನಿಗೊಳಗಾದ ರಸ್ತೆ, ಸೇತುವೆ ಮತ್ತು ಕಟ್ಟಡಗಳ ದುರಸ್ಥಿಗೆ 43.50 ಲಕ್ಷ ರೂ.ಗಳನ್ನು ಬಿಡುಗಡೆ ಮಾಡಲಾಗಿದೆ. ಪ್ರತಿ ವರ್ಷವೂ ಲಭ್ಯವಾಗುವ ನಿರ್ವಹಣ ಅನುದಾನದಲ್ಲಿ ರಸ್ತೆಗಳನ್ನು ದುರಸ್ಥಿಪಡಿಸಿ ವಾಹನ ಸಂಹಾರಕ್ಕೆ ಸುಗಮಗೊಳಿಸಲಾಗಿದೆ.